## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವಿ.ತಿಮ್ಮಯ್ಯ, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕೆ.ಆರ್.ನಗರ (ನಿವೃತ್ತ), ಇವರ ವಿರುದ್ಧದ ಜಂಟಿ ಇಲಾಖಾ ವಿಚಾರಣೆಗೊಳ್ಳುವ ಬಗ್ಗೆ.

ಓದಲಾಗಿದೆ:- ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಮೈಸೂರು ಇವರ ಪತ್ರ ಸಂಖ್ಯೆ: ಸಿ.ಸಿ.ಎ/06/2016-17, ದಿನಾಂಕ: 19.07.2017.

****

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಮೈಸೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ದಿನಾಂಕ: 19.07.2017ರ ಪತ್ರದಲ್ಲಿ ಶ್ರೀ ಡಿ.ಸಿ.ಕಾಂತರಾಜು, ಸಹಾಯಕ ಇಂಜಿನಿಯರ್-2, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ ಹೆಚ್.ಡಿ.ಕೋಟೆ, ಇವರು ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ. ಹೆಚ್.ಡಿ.ಕೋಟೆ, ಇವರ ಸಹಿಯನ್ನು ಫೋರ್ಜರಿ ಮಾಡಿ 42 ಕಾಮಗಾರಿಗಳಿಗೆ ಹಣ ಪಾವತಿಸಿ ಕರ್ತವ್ಯಲೋಪವೆಸಗಿರುವ ಆರೋಪಗಳ ಸಂಬಂಧ ಹಾಗೂ ಪ್ರಕರಣದಲ್ಲಿ ಭಾಗಿಯಾಗಿರುವ ಇನ್ನಿತರ ಅಧಿಕಾರಿ/ನೌಕರರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಅದರಂತೆ, ಸದರಿ ಅವ್ಯವಹಾರದಲ್ಲಿ ಭಾಗಿಯಾಗಿರುವ ಒಟ್ಟು 6 ಅಧಿಕಾರಿ/ನೌಕರರ ಪೈಕಿ ಶ್ರೀ ವಿ.ತಿಮ್ಮಯ್ಯ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕೆ.ಆರ್.ನಗರ, ಇವರು ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 214 ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಸದರಿ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 13 ರನ್ವಯ ಜಂಟಿ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 91 ಇಎನ್‌ಕ್ಯೂ 2017 ಬೆಂಗಳೂರು ದಿನಾಂಕ: 29-10-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳು 214ನೇ ನಿಯಮದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರವು ಶ್ರೀ ವಿ.ತಿಮ್ಮಯ್ಯ, ಕಾರ್ಯಪಾಲಕ ಇಂಜಿನಿಯರ್ (ನಿವೃತ್ತ) ಇವರ ವಿರುದ್ಧದ್ದ ಆರೋಪಗಳ ಕುರಿತು ಇಲಾಖಾ ವಿಚಾರಣೆ ನಡೆಸಬೇಕೆಂದು, ಈ ವಿಚಾರಣೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು-1957ರ ನಿಯಮ 11 ಮತ್ತು 11ಎ ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನವನ್ನು ಅನುಸರಿಸಬೇಕೆಂದು ಈ ಮೂಲಕ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

29/10/2018
(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)